**ದಿನಾಂಕ 22.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 17** ಎಂದು, ಎಂ.ಎಲ್.ಸಿ ರಿಜಿಸ್ಟರ್ ಎಕ್ಸ್ ಟ್ರ್ಯಾಕ್ಟ್ ಮತ್ತು ಪೊಲೀಸ್ ಇಂಟಿಮೇಷನ್ ನ ಧೃಡಿಕತ ಪ್ರತಿ( ಮೂಲ ವಹಿಯೊಂದಿಗೆ ಹೋಲಿಕೆ ಮಾಡಿ ಮೂಲ ವಹಿಯನ್ನು ಸಾಕ್ಷಿಗೆ ಹಿಂದಿರುಗಿಸಲಾಯಿತು) ಗಳನ್ನು ಕ್ರಮವಾಗಿ **ನಿಪಿ 18 ಮತ್ತು 19** ಎಂದು, ಕೇಸ್ ಶೀಟನ್ನು **ನಿಪಿ 20** ಎಂದು ಗುರುತಿಸಲಾಯಿತು.

1ನೇ ಎದುರುದಾರರು ಏಕ ಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ನಿಪಿ18 ರಲ್ಲಿ ವಾಹನ ಸಂಖ್ಯೆ ನಮೂದು ಇಲ್ಲ ಎಂದರೆ ಸರಿ. ದಿನಾಂಕ 29.04.2023ರಂದು ಮಹೇಂದ್ರನ್ ಎಂಬುವವರು ಆಸ್ಪತ್ರೆಯಿಂದ ಬಿಡುಗಡೆ ಹೊಂದಿರುತ್ತಾರೆ ಎಂದರೆ ಸರಿ. ಆರೋಗ್ಯ ಕರ್ನಾಟಕ ಯೋಜನೆ ಅಡಿಯಲ್ಲಿ ಚಿಕಿತ್ಸೆ ಪಡೆದ ಬಗ್ಗೆ ನಿಪಿ 20 ರಲ್ಲಿ ನಮೂದು ಇದೆ ಎಂದರೆ ಸರಿ. ಸದರಿ ಯೋಜನೆಯಡಿಯಲ್ಲಿ ಚಿಕಿತ್ಸೆ ಪಡೆಯುವವರಿಗೆ ಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತದೆ ಎಂದರೆ ಸರಿ. ಅರ್ಜಿದಾರರು ಸದರಿ ಯೋಜನೆಯ ಫಲಾನುಭವಿ ಎಂದರೆ ಸರಿ. ಗಾಯಾಳು ಮೃತಪಟ್ಟಿದ್ದು, ಆ ಬಗ್ಗೆ ನಮಗೆ ಮಾಹಿತಿ ಇಲ್ಲ. ನಾನು ಹಾಜರುಪಡಿಸಿರುವ ದಾಖಲಾತಿಗಳ ಪ್ರಕಾರ ಅರ್ಜಿದಾರರು ಬಿಡುಗಡೆಗೊಂಡ ನಂತರ

ಮುಂದುವರೆದ ಚಿಕಿತ್ಸೆಗೆ ನಮ್ಮ ಆಸ್ಪತ್ರೆಗೆ ಬಂದಿಲ್ಲ ಎಂದರೆ ಸರಿ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**